ARO (YNT) | WCM-03 | 18

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ನಂ.03, ಅಟ್ಟೂರು, ವಾರ್ಡ್‌ಗೆ ಸಂಬಂಧಿಸಿದಂತೆ ದಿನಾಂಕ: 08-02-2019 ರಂದು ನಡೆದ ವಾರ್ಡ್ ಕಮಿಟಿ ಸಭೆಯ ಸಭಾ ನಡಾವಳಿಗಳು

1. ಅಧ್ಯಕ್ಷರು : ಶ್ರೀಮತಿ.ನೇತ್ರಾ ಪಲ್ಲವಿ.ಎಂ (ಪಾಲಿಕೆ ಸದಸ್ಯರು ವಾರ್ಡ್: 03)
2. ವಾರ್ಡ್ ಕಮಿಟಿ ಸದಸ್ಯರುಗಳ ಸಂಖ್ಯೆ : 1 + 10 = 11 Nos.
3. ಹಾಜರಿದ್ದ ಸದಸ್ಯರುಗಳ ಸಂಖ್ಯೆ : 3 Nos.
4. ಹಾಜರಿದ್ದ ಅಧಿಕಾರಿಗಳ ವಿವರ : ಸಹಾಯಕ ಕಂದಾಯ ಅಧಿಕಾರಿ (ಯಲಹಂಕ ಉಪನಗರ) ಉಪವಿಭಾಗ, ವಾರ್ಡ್ ನಂ.3 ರ ಕಂದಾಯ ಪರಿವೀಕ್ಷಕರು ಮತ್ತು ಕಂದಾಯ ವಸೂಲಿಗಾರರು, ವ್ಯವಸ್ಥಾಪಕರು, ಸಹಾಯಕ ಕಂದಾಯ ಅಧಿಕಾರಿ (ಕಲ್ಯಾಣ) ಕಛೇರಿಯ ಸಹಾಯಕರು, ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪನಗರ) ಕಛೇರಿಯ ವಾರ್ಡ್ ನಂ.3 ರ ಹಿರಿಯ ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರು ಹಾಜರಿರುತ್ತಾರೆ.

ಈ ದಿವಸ ಶುಕ್ರವಾರ ಬೆಳಿಗ್ಗೆ 11:30 ಘಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಸಹಾಯಕ ಕಂದಾಯ ಅಧಿಕಾರಿ (ಯಲಹಂಕ ಉಪನಗರ) ಕಛೇರಿಯಲ್ಲಿ ವಾರ್ಡ್ ಕಮಿಟಿ ಸದಸ್ಯರುಗಳ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ಪಾಲಿಕೆ ಸದಸ್ಯರು, ವಾರ್ಡ್ ನಂ.03, ಅಟ್ಟೂರು ರವರ ಅಧ್ಯಕ್ಷತೆಯಲ್ಲಿ ಕರೆಯಲಾಗಿತ್ತು.

ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಮಾನ್ಯ ಪಾಲಿಕೆ ಸದಸ್ಯರು, ವಾರ್ಡ್ ನಂ.03, ವಾರ್ಡ್ ಸದಸ್ಯರಿಗೆ ಹಾಗೂ ಅಧಿಕಾರಿ / ಸಿಬ್ಬಂದಿಗಳಿಗೆ ವಾರ್ಡ್ ಕಮಿಟಿ ಸದಸ್ಯ ಕಾರ್ಯದರ್ಶಿ ರವರು ಸ್ವಾಗತ ಕೋರಿದ ನಂತರ ಸಭೆಯನ್ನು ಪ್ರಾರಂಭ ಮಾಡಲಾಯಿತು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಾನ್ಯ ಅಧ್ಯಕ್ಷರು, ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರರಿಗಾಗಿ 2017-18 ನೇ ಸಾಲಿನ ವಿವಿಧ ಕಲ್ಯಾಣ ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿದರು ಮತ್ತು ಕಲ್ಯಾಣ ಯೋಜನೆಯ ಕಾರ್ಯಕ್ರಮಗಳಿಗೆ ಅರ್ಜಿ ಸಲ್ಲಿಸಿರುವ ಅರ್ಜಿದಾರರ ದಾಖಲೆಗಳನ್ನು ಪರಿಶೀಲಿಸಲಾಗಿ, ಸೂಕ್ತ ದಾಖಲೆಗಳನ್ನು ಸಲ್ಲಿಸಿರುವವರ ಅರ್ಜಿಗಳನ್ನು ಪರಿಶೀಲಿಸಿ ಅರ್ಹ ಫಲಾನುಭವಿಗಳ ಆಯ್ಕೆ ಪಟ್ಟಿಯನ್ನು ಪರಿಶೀಲಿಸಿ ಮಾನ್ಯ ಅಧ್ಯಕ್ಷರು, ಅರ್ಹ ಫಲಾನುಭವಿಗಳ ಆಯ್ಕೆ ಪಟ್ಟಿಯನ್ನು ಅನುಮೋದಿಸಿದರು ಮತ್ತು ಸೂಕ್ತ ದಾಖಲೆಗಳನ್ನು ಸಲ್ಲಿಸದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಸದರಿ ಅರ್ಜಿಗಳನ್ನು ತಿರಸ್ಕರಿಸಲಾಯಿತು.

-ಪು.ತಿ.ನೋ.-

ವಾರ್ಡ್ ನಂ.3 ರ ಯಲಹಂಕ 4ನೇ ಹಂತ, ಡಾ॥ ನೇಹಾ ಪ್ರಕಾಶ್ ಆಸ್ಪತ್ರೆ ಹಿಂಭಾಗದ ರಸ್ತೆಯಲ್ಲಿರುವ ಬೀದಿ ದೀಪಗಳು ಇಲ್ಲದಿರುವ ಬಗ್ಗೆ ಚರ್ಚಿಸಿ, ಬೀದಿ ದೀಪಗಳನ್ನು ಅಳವಡಿಸಲು ಮತ್ತು ಸರಿಯಾಗಿ ನಿರ್ವಹಿಸಲು ಹಾಗೂ ರಸ್ತೆ ಬದಿಯ ಫುಟ್‌ಪಾತ್‌ಗಳಲ್ಲಿ ಹಾಕಿರುವ ಕಲ್ಲುಗಳು ಅಲ್ಲಲ್ಲಿ ತಗ್ಗಿದ್ದು, ಇದರಿಂದಾಗಿ ಸಾರ್ವಜನಿಕರು ನಡೆದಾಡಲು ಕಷ್ಟವಾಗಿದ್ದು, ಅಪಾಯಕಾರಿ ಆಗಿರುವುದರಿಂದ ಕಲ್ಲುಗಳನ್ನು ಅಳವಡಿಸಿ ಸರಿಪಡಿಸಲು ವಾರ್ಡ್ ಕಮಿಟಿ ಸದಸ್ಯರಾದ ಶ್ರೀಮತಿ.ರಾಧ ರವರು ತಿಳಿಸಿದರು. ಇದಕ್ಕೆ ಮಾನ್ಯ ಅಧ್ಯಕ್ಷರು ಸಹಾಯಕ ಕಾರ್ಯಪಾಲಕ ಅಭಿಯಂತರರವರಿಗೆ ಸೂಕ್ತ ಕ್ರಮಕೈಗೊಳ್ಳಲು ತಿಳಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ನಂ.3 ರಲ್ಲಿ ಯಲಹಂಕ 4ನೇ ಹಂತದ ಪ್ರದೇಶದಲ್ಲಿ ಕಸವನ್ನು ಪ್ರತಿ ದಿನ ವಿಲೇವಾರಿ ಮಾಡದೇ ಇರುವುದರಿಂದ ಪ್ರತಿನಿತ್ಯವೂ ಕಸವನ್ನು ವಿಲೇವಾರಿ ಮಾಡಿಸುವ ವ್ಯವಸ್ಥೆಯನ್ನು ಕೈಗೊಳ್ಳಲು ಆರೋಗ್ಯ ವೈದ್ಯಾಧಿಕಾರಿಗಳಿಗೆ ಸೂಚಿಸುವಂತೆ ವಾರ್ಡ್ ಕಮಿಟಿ ಸದಸ್ಯರಾದ ಶ್ರೀಮತಿ.ರಾಧ ರವರು ತಿಳಿಸಿದರು. ಈ ಸಂಬಂಧ ಮಾನ್ಯ ಅಧ್ಯಕ್ಷರು, ಹಾಜರಿದ್ದ ವಾರ್ಡ್ ನಂ.3 ರ ಹಿರಿಯ ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀಮತಿ.ಚಂದ್ರಿಕಾ ಮತ್ತು ಶ್ರೀಮತಿ.ಉಷಾ ರಾಣಿ ರವರಿಗೆ ಸೂಕ್ತ ಕ್ರಮಕೈಗೊಳ್ಳಲು ಸಭೆಯಲ್ಲಿ ಆದೇಶಿಸಿದರು.

ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಚರ್ಚಿಸಲಾದ ಸಮಸ್ಯೆಗಳನ್ನು ಪರಿಶೀಲಿಸಿದರು ಹಾಗೂ ಕುಂದುಕೊರತೆಗಳ ಬಗ್ಗೆ ಮುಂದಿನ ಸಭೆಯಲ್ಲಿ ಚರ್ಚಿಸಿ ಸೂಕ್ತ ತೀರ್ಮಾನ ತೆಗೆದು ಕೊಳ್ಳಲಾಗುವುದೆಂದು ತಿಳಿಸಿ ಸಭೆಯಲ್ಲಿ ಹಾಜರಿದ್ದ ಎಲ್ಲಾರಿಗೂ ವಂದಿಸಿ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

11/2/19

ಸದಸ್ಯ ಕಾರ್ಯದರ್ಶಿ, ವಾರ್ಡ್ ಸಮಿತಿ
ಮತ್ತು ಸಹಾಯಕ ಕಂದಾಯ ಅಧಿಕಾರಿ
(ಯಲಹಂಕ ಉಪನಗರ) ಉಪವಿಭಾಗ

11/2/19

ಪ್ರತಿಯನ್ನು:-

1. ಮಾನ್ಯ ಅಧ್ಯಕ್ಷರು, ವಾರ್ಡ್ ಕಮಿಟಿ, ವಾರ್ಡ್ ನಂ.03, ಅಟ್ಟೂರು ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಉಪ ಆಯುಕ್ತರು ಯಲಹಂಕ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿ, ಯಲಹಂಕ ವಿಭಾಗ, ಯಲಹಂಕ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
5. ಮಾನ್ಯ ಸದಸ್ಯರು, ವಾರ್ಡ್ ಕಮಿಟಿ, ವಾರ್ಡ್ ನಂ.03, ಅಟ್ಟೂರು ರವರುಗಳ ಮಾಹಿತಿಗಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪನಗರ) ಉಪವಿಭಾಗ ರವರ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಆರೋಗ್ಯ ವೈದ್ಯಾಧಿಕಾರಿಗಳು ಬ್ಯಾಟರಾಯನಪುರ ವಿಭಾಗ ರವರ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಂದಾಯ ಅಧಿಕಾರಿ (ಕಲ್ಯಾಣ) ಬ್ಯಾಟರಾಯನಪುರ ವಿಭಾಗ ರವರ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಕಛೇರಿ ಕಡತಕ್ಕೆ.